# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಕೆ.ಜಿ.ಅಡಿವೇರ, ಗ್ರಾಮ ಪಂಚಾಯತಿ ಕಾರ್ಯದರ್ಶಿ(ಪ್ರಭಾರ ಪಂ.ಅ.ಅ.), ಕಡೂರ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ಶಿಫಾರಸ್ಸಿನನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 454 ಗ್ರಾಪಂಕಾ 2016, ದಿನಾಂಕ 24.08.2016
2) ಮಾನ್ಯ ಉಪಲೋಕಾಯುಕ್ತ ರವರ ವರದಿ ಸಂಖ್ಯೆ: ಉಪಲೋಕ್-1/ಡಿಇ/344/2016/ಎಆರ್ಇ-9, ದಿನಾಂಕ 27.02.2018

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ಶ್ರೀ ಕೆ.ಜಿ.ಅಡಿವೇರ, ಗ್ರಾಮ ಪಂಚಾಯತಿ ಕಾರ್ಯದರ್ಶಿ(ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ), ಕಡೂರ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಅಡಿಯಲ್ಲಿ 2009 ರಿಂದ 2014 ವರೆಗೆ 2 ಮನೆಗಳನ್ನು ಮತ್ತು 4 ಶೌಚಾಲಯಗಳನ್ನು ನಿರ್ಮಿಸದೆ, ದಾಖಲೆಗಳಲ್ಲಿ ಫೋರ್ಜರಿ ಸಹಿಗಳನ್ನು ಮಾಡಿ ರೂ.76,200/- ಮೊತ್ತದ ಸರ್ಕಾರಿ ಹಣವನ್ನು ದುರುಪಯೋಗಪಡಿಸಿಕೊಂಡಿರುವ ಬಗ್ಗೆ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ ದೂರಿನ ಸಂಬಂಧ ವಿಚಾರಣೆ ನಡೆಸಲು ಸರ್ಕಾರದಿಂದ ದಿನಾಂಕ 24.08.2016 ರ ಸರ್ಕಾರದ ಆದೇಶ ದಲ್ಲಿ ಕ.ನಾ.ಸೇ.ನಿ.1957 ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲ್ಕಂಡ ಆರೋಪದ ಮೇಲೆ ಶ್ರೀ ಕೆ.ಜಿ.ಅಡಿವೇರ, ಗ್ರಾಮ ಪಂಚಾಯತಿ ಕಾರ್ಯದರ್ಶಿ(ಪ್ರಭಾರ ಪಂ.ಅ.ಅ.), ಕಡೂರ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಸದರಿ ಪ್ರಕರಣದ ಕುರಿತು ವಿಚಾರಣೆ ನಡೆಸಲು ಅಪರ ನಿಬಂಧಕರು ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ ರವರನ್ನು ನೇಮಿಸಲಾಗಿದ್ದು, ಶ್ರೀ ಕೆ.ಜಿ.ಅಡಿವೇರ, ಗ್ರಾಮ ಪಂಚಾಯತಿ ಕಾರ್ಯದರ್ಶಿ(ಪ್ರಭಾರ ಪಂ.ಅ.ಅ.), ರವರು ದಿನಾಂಕ 22.05.2017 ರಂದು ವಿಚಾರಣೆ ಬಾಕಿ ಇರುವ ಅವಧಿಯಲ್ಲಿಯೇ ಮೃತರಾಗಿರುವ ಹಿನ್ನೆಲೆಯಲ್ಲಿ ವಿಚಾರಣೆಯನ್ನು ಮುಕ್ತಾಯಗೊಳಿಸಿರುವುದಾಗಿ ತನಿಖಾ ವರದಿಯಲ್ಲಿ ತಿಳಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಶ್ರೀ ಕೆ.ಜಿ.ಅಡಿವೇರ, ಗ್ರಾಮ ಪಂಚಾಯತಿ ಕಾರ್ಯದರ್ಶಿ(ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ), ಕಡೂರ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಮುಕ್ತಾಯಗೊಳಿಸಿ ಆದೇಶ ಹೊರಡಿಸಲು ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪರಿಶೀಲಿಸಿ, ಶ್ರೀ ಕೆ.ಜಿ.ಅಡಿವೇರ, ಗ್ರಾಮ ಪಂಚಾಯತಿ ಕಾರ್ಯದರ್ಶಿ(ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ) ರವರು ದಿನಾಂಕ 22.05.2017 ರಂದು ಇಲಾಖಾ ವಿಚಾರಣೆ ಜಾರಿಯಲ್ಲಿರುವ ಅವಧಿಯಲ್ಲಿಯೇ ಮೃತರಾಗಿರುವ ಹಿನ್ನೆಲೆಯಲ್ಲಿ ವಿಚಾರಣೆಯನ್ನು ಮುಕ್ತಾಯಗೊಳಿಸಿ ಆದೇಶಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 454 ಗ್ರಾಪಂಕಾ 2016, ಬೆಂಗಳೂರು, ದಿನಾಂಕ: 06.04.2018**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಕೆ.ಜಿ.ಅಡಿವೇರ, ಗ್ರಾಮ ಪಂಚಾಯತಿ ಕಾರ್ಯದರ್ಶಿ(ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ), ಕಡೂರ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ ರವರು ಇಲಾಖಾ ವಿಚಾರಣೆ ಜಾರಿಯಲ್ಲಿರುವ ಅವಧಿಯಲ್ಲಿಯೇ ದಿನಾಂಕ 22.05.2017 ರಂದು ಮೃತರಾಗಿರುವ ಹಿನ್ನೆಲೆಯಲ್ಲಿ, ಸದರಿಯವರ ವಿರುದ್ಧದ ಲೋಕಾಯುಕ್ತ ಇಲಾಖಾ ವಿಚಾರಣೆಯನ್ನು ಮುಕ್ತಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

6/4

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
(ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಅಪರ ನಿಬಂಧಕರು ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಹಾವೇರಿ ಜಿಲ್ಲಾ ಪಂಚಾಯತಿ, ಹಾವೇರಿ.
6) ಕಾರ್ಯನಿರ್ವಾಹಕ ಅಧಿಕಾರಿ, ಹಿರೇಕೆರೂರು ತಾಲ್ಲೂಕು ಪಂಚಾಯತಿ, ಹಿರೇಕೆರೂರು, ಹಾವೇರಿ ಜಿಲ್ಲೆ.
(ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವಂತೆ ಕೋರಿದೆ.)
7) ಗಣಕಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ. – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.